# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 226 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 10-12-2024 |
| ಉತ್ತರಿಸುವ ಸಚಿವರು | : | ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ರಾಜ್ಯದ ವಿವಿಧ ನಗರಗಳ ಅಭಿವೃದ್ಧಿಗೆ ಕೇಂದ್ರದಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ; | ಸ್ಮಾರ್ಟ್ ಸಿಟಿ ಯೋಜನೆಯಡಿ ರಾಜ್ಯದ ವಿವಿಧ ನಗರಗಳ ಅಭಿವೃದ್ಧಿಗೆ ಕೇಂದ್ರದಿಂದ ಇಲ್ಲಿಯವರೆಗೆ ರೂ.3,372.875 ಕೋಟಿ ಅನುದಾನ ಬಿಡುಗಡೆಯಾಗಿರುತ್ತದೆ. |
| ಆ) | ಈ ಅನುದಾನದ ಮೂಲಕ ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಾಮಗಾರಿಗಳನ್ನು ಕೈಗೊಳಲಾಗಿದೆ; | ಬೆಳಗಾವಿ, ದಾವಣಗೆರೆ, ಹುಬ್ಬಳ್ಳಿ-ಧಾರವಾಡ, ಮಂಗಳೂರು, ಶಿವಮೊಗ್ಗ, ತುಮಕೂರು ಮತ್ತು ಬೆಂಗಳೂರು ನಗರಗಳಲ್ಲಿ ಸ್ಮಾರ್ಟ್ ಸಿಟಿ ಯೋಜನೆಯ ಅನುದಾನದಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿರುತ್ತದೆ. |
| ಇ) | ರಾಜ್ಯ ಸರ್ಕಾರವು ಅನುದಾನವನ್ನು ಬಳಸಿಕೊಳ್ಳುವಲ್ಲಿ ಮತ್ತು ಯೋಜನೆಗಳನ್ನು ಅನುಷ್ಠಾನಗೊಳಿಸುವಲ್ಲಿ ವಿಫಲವಾಗಿದೆಯೇ ; | ಇಲ್ಲ.<br><br>ಸ್ಮಾರ್ಟ್ ಸಿಟಿ ಅಭಿಯಾನದಡಿ ಕೇಂದ್ರ ಸರ್ಕಾರದಿಂದ ರೂ.3372.875 ಕೋಟಿ ಹಾಗೂ ರಾಜ್ಯ ಸರ್ಕಾರದಿಂದ ರೂ.3444.875 ಕೋಟಿ ಅನುದಾನದಂತೆ ಒಟ್ಟು ರೂ.6817.75 ಕೋಟಿ ಅನುದಾನ ಬಿಡುಗಡೆಯಾಗಿರುತ್ತದೆ ಹಾಗೂ ರೂ. 6405.78 ಕೋಟಿ (ಶೇಕಡಾ 94%) ಆರ್ಥಿಕ ಪ್ರಗತಿ ಸಾಧಿಸಲಾಗಿರುತ್ತದೆ.<br><br>ಸ್ಮಾರ್ಟ್ ಸಿಟಿಗಳಲ್ಲಿ ಸ್ಮಾರ್ಟ್ ಸಿಟಿ ಅನುದಾನ ಹಾಗೂ ಪಿಪಿಪಿ ಮಾದರಿಯಡಿ ರೂ. 7474.04 ಕೋಟಿ ಮೊತ್ತದ ಒಟ್ಟು 690 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ಈ ಪೈಕಿ ರೂ.5591.70 ಕೋಟಿ ಮೊತ್ತದ 631 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಉಳಿದ ರೂ.1,742.24 ಕೋಟಿ ಮೊತ್ತದ 58 ಕಾಮಗಾರಿಗಳನ್ನು ಸ್ಮಾರ್ಟ್ ಸಿಟಿ ಯೋಜನಾ ಅವಧಿಯಾದ ಮಾರ್ಚ್2025ರ ಒಳಗಾಗಿ ಪೂರ್ಣಗೊಳಿಸುವಂತೆ ನಿರ್ದೇಶಿಸಲಾಗಿದೆ. |
| ಈ) | ಇಲ್ಲವಾದಲ್ಲಿ, ಈ ಅನುದಾನದಿಂದ ಕೈಗೊಂಡ ಕಾಮಗಾರಿಗಳು ಯಾವ ಹಂತದಲ್ಲಿವೆ ? | |

ಸಂಖ್ಯೆ: ನಅಇ 232 ಸಿಎಸ್ಎಸ್ 2024

(ಬಿ.ಎಸ್.ಸುರೇಶ)
ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು